ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಲೋಕೋಪಯೋಗಿ ಇಲಾಖೆಯ ವಿವಿಧ ಶೀರ್ಷಿಕೆಗಳಡಿ ಕೈಗೊಂಡ ಕಾಮಗಾರಿಯ ಕುರಿತು

ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

202 (421) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 02 ವರ್ಷಗಳಿಂದ ಲೋಕೋಪಯೋಗಿ ಇಲಾಖೆಯ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಕಾಮಗಾರಿ ಕೈಗೊಂಡು ಪೂರ್ಣಗೊಳಿಸಿರುವ ಗುತ್ತಿಗೆದಾರರಿಗೆ ಹಾಗೂ ಪಾವತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪಾವತಿಗೆ ಬಾಕಿಯಿರುವ ಬಿಲ್ಲುಗಳ ಒಟ್ಟು ಮೊತ್ತವೆಷ್ಟು;

(ಆ) ಕಳೆದ 02 ವರ್ಷಗಳಿಂದ ಗುತ್ತಿ ರರಿಗೆ ಬಿಡುಗಡೆ ಮಾಡಿರುವ ಕಾಮಗಾರಿಗಳ ಬಿಲ್ಲುಗಳ ಮೊತ್ತವೆಷ್ಟು;

(ಇ) ಗುತ್ತಿಗೆದಾರರಿಗೆ ಸಮಯಕ್ಕೆ ಸರಿಯಾಗಿ ಕಾಮಗಾರಿಗಳ ಬಿಲ್ಲುಗಳ ಮೊತ್ತವನ್ನು ಪಾವತಿಸದೇ ಇರುವುದರಿಂದ ಗುತ್ತಿಗೆದಾರರು ತೊಂದರೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಈ ಗುತ್ತಿಗೆದಾರರಿಗೆ ಯಾವಾಗ ಹಣವನ್ನು ಬಿಡುಗಡೆ ಮಾಡಲಾಗುವುದು?